ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 99 ಇಂತಹ ಪ್ರಕರಣಗಳಿದ್ದು ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ :

ಗುಲ್ಬರ್ಗಾ ಜಿಲ್ಲೆ - 34 ಪ್ರಕರಣಗಳು

ಬಿಜಾಪುರ ಜಿಲ್ಲೆ - 52

ಮಂಡ್ಯ ಜಿಲ್ಲೆ - 08

ಧಾರವಾಡ ಜಿಲ್ಲೆ - 05

ಇ) (ಆ) ಗುಲ್ಬರ್ಗಾ ಜಿಲ್ಲೆಯಲ್ಲಿ 34 ಅಭ್ಯರ್ಥಿಗಳನ್ನು ಮತ್ತು ಬಿಜಾಪುರ ಜಿಲ್ಲೆಯಲ್ಲಿ 14 ಮಂದಿ ಅಭ್ಯರ್ಥಿಗಳನ್ನು ವಜಾ ಮಾಡಲಾಗಿತ್ತು. ಕ. ಆ. ನ್ಯಾಯ ಮಂಡಳಿಯು ಈ ಆದೇಶಗಳನ್ನು ಅನೂರ್ಜಿತಗೊಳಿಸಿ ಈ ಬಗ್ಗೆ ಕ್ರಮ ತೆಗೆದುಕೊಳ್ಳುವ ಮುನ್ನ ಸಂಬಂಧಪಟ್ಟವರಿಗೆ ಅವಕಾಶ ನೀಡುವಂತೆ ನಿರ್ದೇಶಿಸಿದ ಹಿನ್ನೆಲೆಯಲ್ಲಿ ಎಲ್ಲಾ 99 ಪ್ರಕರಣಗಳಲ್ಲೂ ಕ್ರಮ ತೆಗೆದುಕೊಳ್ಳಲಾಗಿದೆ.

ಆ) 52 ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿ. ಒ. ಡಿ. ಯಿಂದ ವರದಿ ಬಂದಿದ್ದು, ಸದರಿ ಪ್ರಕರಣಗಳ ಬಗ್ಗೆ ಪೋಲೀಸ್ ಠಾಣೆಯಲ್ಲಿ ಫೀರ್ಯಾದು ದಾಖಲಿಸುವಂತೆ ನಿರ್ದೇಶನ ನೀಡಲಾಗಿದೆ. ಅದೇ ರೀತಿ ಉಳಿದ ಪ್ರಕರಣಗಳಲ್ಲೂ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಮಂಡ್ಯ ಜಿಲ್ಲೆಗೆ ಸಂಬಂಧಿಸಿದ ಪ್ರಕರಣಗಳ ಬಗ್ಗೆ ಲೋಕೋಯುಕ್ತದ ವರದಿ ಬಂದಿದೆ. ಈ ಎಲ್ಲಾ 99 ಮಂದಿಗೆ ಕುಷ್ಠರೋಗದಿಂದ ಗುಣ ಹೊಂದಿದವರೆಂದು ಸುಳ್ಳು ವೈದ್ಯಕೀಯ ಪ್ರಮಾಣ ಪತ್ರ ನೀಡಿದ ವೈದ್ಯಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ.

ಹಾವೇರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಉದ್ಯೋಗ ಭರವಸೆ ಯೋಜನೆ

960 (92) ಶ್ರೀ ಕುನ್ನೂರು ಮಂಜುನಾಥ ಚನ್ನಪ್ಪ : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಾವೇರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಉದ್ಯೋಗ ಭರವಸೆ ಯೋಜನೆಗಾಗಿ ಎಷ್ಟು ಹಣ ಮಂಜೂರು ಮಾಡಲಾಗಿದೆ ?

ಆ) ಹಾವೇರಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು) :

ಅ) 1998-99ನೇ ಸಾಲಿನಲ್ಲಿ ಉದ್ಯೋಗ ಭರವಸೆ ಯೋಜನೆಯಡಿ ಹಾವೇರಿ ಜಿಲ್ಲೆಗೆ ಕೇಂದ್ರ ಸರ್ಕಾರದಿಂದ ರೂ. 440.00 ಲಕ್ಷ ಹಾಗೂ ರಾಜ್ಯ ಸರ್ಕಾರದಿಂದ 110.00 ಲಕ್ಷ ರೂ. ಒಟ್ಟು ರೂ. 550.00 ಲಕ್ಷ ರೂ. ಗಳನ್ನು ಬಿಡುಗಡೆ ಮಾಡಲಾಗಿದೆ.

ಆ) ಈ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.